ದಿಃ 13.03.2026

**ಪ್ರಭಾರ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಹೊಳಲ್ಕೆರೆ.**

**ಸಿ.ಸಿ.953/2020**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ತಿಪ್ಪೇಸ್ವಾಮಿ.ಬಿ. | ಪ್ರಾ.ಸಾ.6 |
| ತಂದೆಯ/ಗಂಡನ ಹೆಸರು | : | ಬಿ.ಭೀಮಪ್ಪ | ಚಾ.ಸಾ.20 |
| ವಯಸ್ಸು | : | 60 ವರ್ಷ | |
| ಕೆಲಸ | : | ನಿವೃತ್ತ ಮುಖ್ಯ ಪೇದೆ | ಸಾ ಪ್ರ ಬೋ |
| ವಾಸ | : | ಚಳ್ಳಕೆರೆ | ದಿಃ13.03.2026 |

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

ನಾನು 2016 ರಿಂದ 2023 ರವರೆಗೆ ಹೊಳಲ್ಕೆರೆ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿನಾಂಕ 05.10.2018 ರಂದು ಮಧ್ಯಾಹ್ನ 03.00 ರ ಸಮಯದಲ್ಲಿ ನಾನು ಠಾಣಾ ಕರ್ತವ್ಯದಲ್ಲಿ ಇದ್ದಾಗ ಚಾಸಾ.1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಸ್ವೀಕರಿಸಿಕೊಂಡು ಠಾಣಾ ಮೊಕದ್ದಮೆ ನಂ.260/2018 ರಂತೆ ಪ್ರ.ವ.ವರದಿಯನ್ನು ದಾಖಲಿಸಿರುತ್ತೇನೆ. ನಂತರ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗೆ ವರದಿ ಮಾಡಿರುತ್ತೇನೆ. ಸಾಕ್ಷಿ ನಿಪಿ.1 ರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ನಿಪಿ.1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿ ಪ್ರ.ವ.ವರದಿಯನ್ನು ನೋಡಿ ಗುರುತಿಸಿದ್ದು, ನಿಪಿ.15 ಎಂದು, ಸಾಕ್ಷಿಯ ಸಹಿಯನ್ನು ನಿಪಿ.15(ಎ) ಎಂದು ಗುರುತಿಸಲಾಯಿತು. ನಂತರ ಪ್ರಕರಣದ ಕಡತವನ್ನು ಚಾಸಾ.21 ರವರಿಗೆ ವಹಿಸಿಕೊಟ್ಟಿರುತ್ತೇನೆ.

**ಪಾಟೀ ಸವಾಲು : ಆರೋಪಿ ಪರ ಶ್ರೀ ಟಿ.ವಿ. ವಕೀಲರಿಂದ**

3. ದಿನಾಂಕ 05.10.2018 ರಂದು ಯಾವುದೇ ದೂರನ್ನು ಸ್ವೀಕರಿಸಿಲ್ಲ ಎಂದರೆ ಸರಿಯಲ್ಲ. ಮೃತರ ಕುಟುಂಬದವರಿಗೆ ಪರಿಹಾರ ದೊರಕಿಸಿಕೊಡುವ ಸಲುವಾಗಿ ಸುಳ್ಳು ದೂರನ್ನು ದಾಖಲಿಸಿಕೊಂಡು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ : ಇಲ್ಲ.**

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿಯಿದೆ.

ಪ್ರಭಾರ ಅಪರ ಸಿವಿಲ್ ನ್ಯಾಯಾಧೀಶರು

ದಿಃ 13.03.2026

**ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ.**